ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 05–01–2021

# ಮಾಧ್ಯಮ ಆಮಂತ್ರಣ

1) ಕನ್ನಡ ಪುಸ್ತಕ ಪ್ರಾಧಿಕಾರದಿಂದ ವಿವಿಧ ವಾರ್ಷಿಕ ಪ್ರಶಸ್ತಿ ಹಾಗೂ ಬಹುಮಾನ ಪ್ರದಾನ ಸಮಾರಂಭ –2019 :

ಉದ್ಘಾಟನೆ ಹಾಗೂ ಪ್ರಶಸ್ತಿ ಪ್ರದಾನ :
ಡಾ. ನರಹಳ್ಳಿ ಬಾಲಸುಬ್ರಮಣ್ಯ, ಖ್ಯಾತ ವಿಮರ್ಶಕರು

ಅಧ್ಯಕ್ಷತೆ :

ಡಾ : ಎಂ. ಎನ್ ನಂದೀಶ್ ಹಂಚೆ,
ಅಧ್ಯಕ್ಷರು, ಕನ್ನಡ ಪುಸ್ತಕ ಪ್ರಾಧಿಕಾರ

"ದರ್ಪಣ" ಕಿರುಹೊತ್ತಿಗೆ ಬಿಡುಗಡೆ :
ಶ್ರೀಮತಿ ವಿ. ರಶ್ಮಿ ಮಹೇಶ್, ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ

ದಿನಾಂಕ : 06–01–2021, ಬುಧವಾರ ಬೆಳಿಗ್ಗೆ 11–00 ಗಂಟೆಗೆ
ಸ್ಥಳ : ರವೀಂದ್ರ ಕಲಾಕ್ಷೇತ್ರ, ಜಯಚಾಮರಾಜೇಂದ್ರ ರಸ್ತೆ, ಬೆಂಗಳೂರು

# ಪತ್ರಿಕಾ ಪ್ರಕಟಣೆ

## ಸಚಿವ ಗೋಪಾಲಯ್ಯ ಅವರಿಂದ ಕ್ಯಾಲೆಂಡರ್ ಬಿಡುಗಡೆ ಸಮಾರಂಭ

**ಬೆಂಗಳೂರು, ಡಿಸೆಂಬರ್ 05 (ಕರ್ನಾಟಕ ವಾರ್ತೆ):**

ಕರ್ನಾಟಕ ರಾಜ್ಯ ಸರ್ಕಾರಿ ಪಡಿತರ ವಿತರಣ ಸಂಘವು ಪಡಿತರ ವಿತರಣೆಯಲ್ಲಿ ನಮ್ಮ ರಾಜ್ಯ ದೇಶಕ್ಕೆ ಮಾದರಿಯಾಗಬೇಕು ಎಂದು ಆಹಾರ ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಮತ್ತು ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೆ. ಗೋಪಾಲಯ್ಯ ತಿಳಿಸಿದರು.

ಇಂದು ರವೀಂದ್ರ ಕಲಾಕ್ಷೇತ್ರದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ಪಡಿತರ ವಿತರಣ ಸಂಘವು ಹಮ್ಮಿಕೊಂಡಿದ್ದ "ರಾಜ್ಯ ಮಟ್ಟದ ಕಾರ್ಯಕ್ರಮ, ಕ್ಯಾಲೆಂಡರ್ ಬಿಡುಗಡೆ ಹಾಗೂ ಸಮ್ಮೇಳನದ ಸಂಚಿಕೆ ಬಿಡುಗಡೆ ಸಮಾರಂಭವನ್ನು ದೀಪ ಬೆಳಗುವ ಮೂಲಕ ಸಚಿವರು ಉದ್ಘಾಟಿಸಿ ಕ್ಯಾಲೆಂಡರ್ ಬಿಡುಗಡೆ ಮಾಡಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಸಚಿವರು ಕರೋನಾ ಸಂದರ್ಭದಲ್ಲಿ ರಾಜ್ಯದಲ್ಲಿ ಪಡಿತದಾರರಿಗೆ ಪಡಿತರ ವಿತರಣೆ ಮಾಡಿ ಉತ್ತುಮ ಸೇವೆ ಸಲ್ಲಿಸಿದೆ. ಹೊರ ರಾಜ್ಯ, ಹೊರ ಜಿಲ್ಲೆಯಿಂದ ಜೀವನೋಪಾಯಕ್ಕಾಗಿ ಬಂದ ಜನರಿಗೂ ಪಡಿತರವನ್ನು ನೀಡಿ ಸಹಾಯ ಮಾಡಿದೆ ಎಂದು ತಿಳಿಸಿದರು.

ಪಡಿತರ ವಿತರಕರ ಸಂಘದ ಅಧ್ಯಕ್ಷರಾದ ಟಿ.ಕೃಷ್ಣಪ್ಪನವರು ರಾಜ್ಯ ಸರ್ಕಾರಿ ಪಡಿತರ ವಿತರಕರ ಬೇಡಿಕೆಗಳ ಮನವಿ ಪತ್ರವನ್ನು ಸಚಿವ ಗೋಪಾಲಯ್ಯನವರಿಗೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಆಹಾರ ನಾಗರೀಕರ ಸರಬರಾಜು ಹಾಗೂ ಗ್ರಾಹಕರ ವ್ಯವಹಾಗರಳ ಇಲಾಖೆಯ ಅಪರ ಮುಖ್ಯಕಾರ್ಯದರ್ಶಿ ಹಾಗೂ ಪ್ರಧಾನ ಕಾರ್ಯದರ್ಶಿ ಬಿ.ಹೆಚ್.ಅನಿಲ್ ಕುಮಾರ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

**ಛಾಯಾಚಿತ್ರ ಶೀರ್ಷಿಕೆ)**

ಶ್ರೀ ಕೆ ಗೋಪಾಲಯ್ಯ ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಸಚಿವರು ಇಂದು ಸರ್ಕಾರಿ ಪಡಿತರ ವಿತರಕರ ಕ್ಯಾಲೆಂಡರ್ ಹಾಗು ಸಮ್ಮೇಳನ ಸಂಚಿಕೆಯನ್ನು ರವಿಂದ್ರ ಕಲಾಕ್ಷೇತ್ರದಲ್ಲಿ ಬಿಡುಗಡೆ ಮಾಡಿದರು. ಶ್ರೀ ಅನಿಲ್ ಕುಮಾರ್ ಕಾರ್ಯ ದರ್ಶಿಗಳು, ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಇ–ಕೆವೈಸಿ ಕಾರ್ಯಕ್ರಮ ಪುನರಾರಂಭ

**ಬೆಂಗಳೂರು, ಜನವರಿ 05 (ಕರ್ನಾಟಕ ವಾರ್ತೆ):**

ಪಡಿತರ ಚೀಟಿದಾರರುಗಳ ಮಾಹಿತಿಯನ್ನು ಉನ್ನತೀಕರಿಸಲು 2019 ಜೂನ್ ಮಾಹೆಯಿಂದ 2020 ಫೆಬ್ರವರಿ ಮಾಹೆಯವರೆಗೆ ನ್ಯಾಯಬೆಲೆ ಅಂಗಡಿಗಳ ಮೂಲಕ ಇ–ಕೆವೈಸಿ ಕಾರ್ಯಕ್ರಮ ನಡೆಸಲಾಗಿತ್ತು. ಕೋವಿಡ್ –19 ರ ಹಿನ್ನೆಲೆಯಲ್ಲಿ ಇ–ಕೆವೈಸಿ ಕಾರ್ಯಕ್ರಮವನ್ನು ಸ್ಥಗಿತಗೊಳಿಸಲಾಗಿತ್ತು. ಪ್ರಸ್ತುತ ಎಎವೈ, ಪಿಹೆಚ್‌ಹೆಚ್ ಪಡಿತರ ಚೀಟಿಗಳ ಇ–ಕೆವೈಸಿ ಸಂಗ್ರಹಿಸುವ ಕಾರ್ಯವನ್ನು ನ್ಯಾಯಬೆಲೆ ಅಂಗಡಿಗಳ ಮೂಲಕ ಮರುಪ್ರಾರಂಭಿಸಲಾಗಿದೆ ಎಂದು ಉಪ ನಿರ್ದೇಶಕರು, ಆಹಾರ ಮತ್ತು ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಪಶ್ಚಿಮ ವಲಯ, ಬೆಂಗಳೂರು ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉತ್ತರ ಕರ್ನಾಟಕದಲ್ಲಿ ರೇಷ್ಮೆ ಉತ್ಪಾದನಾ ಘಟಕ ಸ್ಥಾಪಿಸಲು ಚಿಂತನೆ

**ಬೆಂಗಳೂರು, ಜನವರಿ 05 (ಕರ್ನಾಟಕ ವಾರ್ತೆ):**

ಉತ್ತರ ಕರ್ನಾಟಕದಲ್ಲಿ ರೇಷ್ಮೆ ಉತ್ಪಾದನಾ ಘಟಕ ಪ್ರಾರಂಭಿಸುವ ಕುರಿತು ಕರ್ನಾಟಕ ಸರ್ಕಾರದ ರೇಷ್ಮೆ ಮಾರಾಟ ಮಂಡಳಿ ನಿಯಮಿತ ಅಧ್ಯಕ್ಷರಾದ ಶ್ರೀಮತಿ ಸವಿತಾ ವಿ. ಅಮರಶೆಟ್ಟಿ ಅವರು ಕೇಂದ್ರ ರೇಷ್ಮೆ ಮಂಡಳಿಯ ಕಾರ್ಯದರ್ಶಿ ಒಕಂಡಿಯಾರ್ ನಿರ್ದೇಶಕ ಡಾ. ಸುಭಾಷ್ ವಿ. ನಾಕ್ ಅವರೊಂದಿಗೆ ಕೆ.ಎಸ್.ಎಂ.ಬಿ. ಮತ್ತು ಕೆ.ಎಸ್.ಐ.ಸಿ. ಸಹಯೋಗದೊಂದಿಗೆ ಯೋಜನೆಗಳನ್ನು ಅನುಷ್ಠಾನಗೊಳಿಸುವ ಬಗ್ಗೆ ಚರ್ಚಿಸಿದರು.

ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ ನಿಯಮಿತಕ್ಕೆ ರೇಷ್ಮೆ ಪರೀಕ್ಷೆ ಸೌಲಭ್ಯಗಳನ್ನು ನೀಡುವ ಬಗ್ಗೆ ಮನವಿ ಮಾಡಿ ರೇಷ್ಮೆ ನೂಲು ಬಿಚ್ಚಾಣಿಕೆ, ಹುರಿ, ನೇಯ್ಗೆ ಪರೀಕ್ಷೆ ಮಾಡುವ ವಿಧಾನಗಳನ್ನು ಪರಿವೀಕ್ಷಣೆ ಮಾಡಿ, ರೇಷ್ಮೆ ವಲಯದಲ್ಲಿ ಅಭಿವೃದ್ಧಿಗೆ ಸಂಬಂಧಪಟ್ಟಂತೆ ವಿನೂತನ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳುವ ಬಗ್ಗೆ ಚರ್ಚಿಸಿದರು. ನೇಕಾರರಿಗೆ ಸರ್ಕಾರದಿಂದ ಸಿಗುತ್ತಿರುವ ಸೌಲಭ್ಯಗಳನ್ನು ಹೆಚ್ಚು ಮಾಡುವ ಕುರಿತು ಚರ್ಚಿಸಲಾಯಿತು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಅರ್ಜಿ ಆಹ್ವಾನ

ಬೆಂಗಳೂರು, ಡಿಸೆಂಬರ್ 05 (ಕರ್ನಾಟಕ ವಾರ್ತೆ):

ಭಾರತೀಯ ಅಂಚೆ ಇಲಾಖೆ, ಕರ್ನಾಟಕ ಅಂಚೆ ವೃತ್ತವು ಕರ್ನಾಟಕದಲ್ಲಿರುವ 2,443 ಗ್ರಾಮೀಣ ಅಂಚೆ ನೌಕರರ ಹುದ್ದೆಗಳನ್ನು ತುಂಬಲು ಆನ್‌ಲೈನ್ ಪ್ರಕಟಣೆ/ಜಾಹೀರಾತು ಪ್ರಕಟಿಸಿದೆ. ಕನಿಷ್ಠ ವಿದ್ಯಾರ್ಹತೆ ಎಸ್‌ಎಸ್‌ಎಲ್‌ಸಿ ಮತ್ತು ವಯೋಮಿತಿ ಕನಿಷ್ಠ 18 ರಿಂದ 40 ವರ್ಷಗಳಾಗಿದ್ದು ಅನುಸೂಚಿತ ಜಾತಿ / ಬುಡಕಟ್ಟು / ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಅಭ್ಯರ್ಥಿಗಳು http://appost.in/gdsonline ಅಂತರ್ಜಾಲದಲ್ಲಿ ನೋಂದಾಯಿಸುವುದು ಹಾಗೂ ಪೋಸ್ಟ್ ಮಾಸ್ಟರ್ ಜನರಲ್ ಬೆಂಗಳೂರು ಮುಖ್ಯ ಕಾರ್ಯಾಲಯ, 080–223925599, ದಕ್ಷಿಣ ವಲಯ 94814 55606, ಉತ್ತರ ವಲಯ 0836–2740454, ಮುಖ್ಯ ಪೋಸ್ಟ್ ಮಾಸ್ಟರ್ ಜನರಲ್ ಕರ್ನಾಟಕ ವೃತ್ತ 080–22392544 ಇವರನ್ನು ಸಂಪರ್ಕಿಸಬಹುದಾಗಿದೆ. ಅರ್ಜಿ ಸಲ್ಲಿಸಲು 20–01–2021 ಕೊನೆಯ ದಿನವಾಗಿರುತ್ತದೆ.

# "ಯುವ 2021"

ಬೆಂಗಳೂರು, ಡಿಸೆಂಬರ್ 05 (ಕರ್ನಾಟಕ ವಾರ್ತೆ):

ನೆಹರೂ ಯುವ ಕೇಂದ್ರ ಸಂಘಟನೆಯಿಂದ ಇಂದು ಬೆಂಗಳೂರಿನ ಕೆಎಲ್‌ಇ ಕಾಲೇಜಿನಲ್ಲಿ ರಾಜ್ಯಮಟ್ಟದ ಯುವ ಪಾರ್ಲಿಮೆಂಟ್ ಅಧಿವೇಶನವನ್ನು ಆಯೋಜಿಸಲಾಗಿತ್ತು. ಡಾ: ಶಾಲಿನಿ ರಜನೀಶ್, ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರು "ಯುವ 2021" ಅಧಿವೇಶನವನ್ನು ಉದ್ಘಾಟಿಸಿದರು. ರಾಜ್ಯ ನಿರ್ದೇಶಕ ಅಟುಲ್ ಜೆ ನಿಕ್ಕಾಮ್ ಅವರು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಪ್ರತಿ ಜಿಲ್ಲೆಯಿಂದ ಇಬ್ಬರನ್ನು ಆಯ್ಕೆ ಮಾಡಲಾಗುವುದು. ಮೊದಲ ಮೂರು ವಿಜೇತರಿಗೆ ಪಾರ್ಲಿಮೆಂಟ್‌ನ ಸೆಂಟ್ರಲ್ ಹಾಲ್‌ನಲ್ಲಿ ಜನವರಿ 12, 2021 ರಂದು ಜರುಗಲಿರುವ ಕಾರ್ಯಕ್ರಮದಲ್ಲಿ ಭಾರತದ ಪ್ರದಾನ ಮಂತ್ರಿಯವರು ಭಾಗವಹಿಸಲಿರುವರು. ವಿಜೇತರಾದವರಿಗೆ 2.00 ಲಕ್ಷ ರೂ. 1.5 ಲಕ್ಷ, ಹಾಗೂ 1.00 ಲಕ್ಷ ರೂ ನಗದು ಪುರಸ್ಕಾರ ಲಭಿಸಲಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಜ. 7 ರಂದು “ಕೃಷಿ ಸಂಜೀವಿನಿ” ಲೋಕಾರ್ಪಣೆ ಸಜ್ಜು

**ಬೆಂಗಳೂರು, ಜನವರಿ 05 (ಕರ್ನಾಟಕ ವಾರ್ತೆ):**

ಕಳೆದ ಬಜೆಟ್ ನಲ್ಲಿ ಘೋಷಿಸಿದಂತೆ ಕೃಷಿಯಲ್ಲಿ ಕಾಲಕಾಲಕ್ಕೆ ಮಣ್ಣು, ಕೀಟ ರೋಗ , ನೀರು ಪರೀಕ್ಷೆ ಮತ್ತು ಇತರೆ ತಾಂತ್ರಿಕ ನೆರವಿಗಾಗಿ ಸಂಚಾರಿ ಕೃಷಿ ಹೆಲ್ತ್ ಕ್ಲಿನಿಕ್ ಗಳನ್ನು ಕೃಷಿ ಇಲಾಖೆ ಲೋಕಾರ್ಪಣೆಗೊಳಿಸುತ್ತಿದೆ. ಇದೇ ಜ. 5 ರಂದು “ಕೃಷಿ ಸಂಜೀವಿನಿ” ಹೆಸರಿನ ಸಂಚಾರಿ ಕೃಷಿ ವಾಹನ ರೈತರ ಮನೆಬಾಗಿಲಿಗೆ ಬರಲು ಸಜ್ಜಾಗಿದೆ.
ಇದೇ ಜ.7 ರಂದು ಬೆಳಿಗ್ಗೆ 10 ಗಂಟೆಗೆ ವಿಧಾನಸೌಧದ ಪೂರ್ವದ್ವಾರದ ಮೆಟ್ಟಿಲುಗಳ ಮುಂಭಾಗ “ಕೃಷಿ ಸಂಜೀವಿನಿ” ವಾಹನಗಳನ್ನು ಕೃಷಿ ಸಚಿವ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ರೈತರಿಗೆ ಸಮರ್ಪಿಸುತ್ತಿದ್ದಾರೆ. ಇದೇ ವೇಳೆ ಕೃಷಿ ಸಚಿವ ಬಿ.ಸಿ.ಪಾಟೀಲ್ ಪರೀಕ್ಷಾ ಉಪಕರಣಗಳಿಗೆ ಚಾಲನೆ ನೀಡಲಿದ್ದಾರೆ.

ಚಿಕ್ಕ ಜಿಲ್ಲೆಗಳಿಗೆ ಒಂದು ದೊಡ್ಡ ಜಿಲ್ಲೆಗಳಿಗೆ ಎರಡರಂತೆ ರಾಜ್ಯಾದ್ಯಂತ ಒಟ್ಟು 40 “ಕೃಷಿ ಸಂಜೀವಿನಿ” ವಾಹನಗಳು ರೈತರಿಗೆ ಲೋಕಾರ್ಪಣೆಗೊಳ್ಳುತ್ತಿವೆ.
ಏನಿದು ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯ ( ಕೃಷಿ ಸಂಜೀವಿನಿ)?

ಇದು ಕೃಷಿ ಉತ್ಪಾದನೆ ಮತ್ತು ಉತ್ಪಾದಕತೆಯು ನೈಸರ್ಗಿಕ ವಿಕೋಪಗಳಾದ ಅನಾವೃಷ್ಟಿ, ಅತಿವೃಷ್ಟಿ, ಚಂಡಮಾರುತ, ಬೆಳೆಗಳಿಗೆ ಕಾಡುವ ಕೀಟ ಮತ್ತು ರೋಗ ಬಾಧೆ ಹಾಗೂ ಮಣ್ಣಿನ ಫಲವತ್ತತೆ ಮತ್ತು ಇತರ ಅಂಶಗಳ ಮೇಲೆ ಅವಲಂಬಿತವಾಗಿರುತ್ತದೆ. ಸುಧಾರಿತ ಕೃಷಿ ಉತ್ಪಾದನಾ ತಾಂತ್ರಿಕತೆ, ಗುಣಮಟ್ಟದ ಕೃಷಿ ಪರಿಕರಗಳ ಪೂರೈಕೆ ಮತ್ತು ಶಿಫಾರಸ್ಸು ಮಾಡಲಾದ ರಸಗೊಬ್ಬರಗಳ ಸಮರ್ಪಕ ಬಳಕೆ, ರೋಗ - ಕೀಟಗಳ ಹತೋಟಿ , ಮಣ್ಣಿನಲ್ಲಿ ಲಭ್ಯವಿರುವ ಪೋಷಕಾಂಶಗಳ ಬಗ್ಗೆ ರೈತರಿಗೆ ಮಾಹಿತಿ ಒದಗಿಸಿ , ಸೂಕ್ತ ಬೆಳೆ ಬೆಳೆಯಲು ಪ್ರೋತ್ಸಾಹಿಸುವುದು ಇಲಾಖೆಯ ಆದ್ಯ ಕರ್ತವ್ಯವಾಗಿರುತ್ತದೆ . ಕೀಟ , ರೋಗ ಮತ್ತು ಕಳೆಗಳ ಬಾಧೆ ಹಾಗೂ ಮಣ್ಣಿನ ಪೋಷಕಾಂಶ ಕೊರತೆ ಹಾಗು ಸಮರ್ಪಕ ನಿರ್ವಹಣೆ ಕುರಿತಂತ ರೈತರ ತಾಕುಗಳಲ್ಲಿಯೇ ಹತೋಟಿ ಕ್ರಮಗಳ ಕುರಿತು ಮಾರ್ಗೋಪಾಯಗಳನ್ನು ಒದಗಿಸಲು ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯ ( ಕೃಷಿ ಸಂಜೀವಿನಿ ಯೋಜನೆಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.

2020-21ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ 40 ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯಗಳನ್ನು ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಸ್ಥಾಪಿಸಲು ಅನುದಾನವನ್ನು ಒದಗಿಸಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ. ಇದೇ ರೀತಿ ಬಳ್ಳಾರಿ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಆಯಾ ಜಿಲ್ಲೆಗಳಲ್ಲಿ ಜಿಲ್ಲಾ ಖನಿಜ ಪ್ರತಿಷ್ಠಾನದ ಕ್ರಿಯಾ ಯೋಜನೆಯಡಿ ಲಭ್ಯವಿರುವ ಅನುದಾನದಡಿ ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯ ( ಕೃಷಿ ಸಂಜೀವಿನಿ ) ಲೋಕಾರ್ಪಣೆಗೊಳಿಸಲಾಗುತ್ತಿದೆ.

ಕೃಷಿ ಸಂಜೀವಿನಿಯ ಉದ್ದೇಶವೇನು?:

ಸಕಾಲದಲ್ಲಿ ಬೆಳೆಯ ಎಲ್ಲಾ ಹಂತಗಳಲ್ಲಿ ಸರ್ವೇಕ್ಷಣೆಯನ್ನು ಕೈಗೊಂಡು ಕಂಡುಬಂದಿರುವ / ಕಂಡುಬರಬಹುದಾದ ಕೀಟ / ರೋಗ / ಕಳೆಗಳ ನಿರ್ವಹಣಾ ಮಾರ್ಗೋಪಾಯಗಳನ್ನು ರೈತರಿಗೆ ತಿಳಿಸುವುದು , ಈಗಾಗಲೇ ರಾಜ್ಯ ಮಟ್ಟದಲ್ಲಿ ರಾಜ್ಯ ಪೀಡ ಸರ್ವೇಕ್ಷಣಾ ಮತ್ತು ಸಲಹಾ ಸಮಿತಿ ಹಾಗೂ ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಪೀಡೆ ಸರ್ವೇಕ್ಷಣಾ ಮತ್ತು ಸಲಹಾ ಸಮಿತಿ ಅಸ್ಥಿತ್ವದಲ್ಲಿದ್ದು , ಸದರಿ ಸಲಹಾ ಸಮಿತಿಗಳಲ್ಲಿ ಕೃಷಿ ವಿಶ್ವವಿದ್ಯಾಲಯಗಳ ವಿಜ್ಞಾನಿಗಳು , ಭಾರತೀಯ ಕೃಷಿ ಅನುಸಂಧಾನ ಸಂಸ್ಥೆಯ ವಿಜ್ಞಾನಿಗಳು , ಕೇಂದ್ರೀಯ ಸಮಗ್ರ ಪೀಡೆ ನಿರ್ವಹಣಾ ಕೇಂದ್ರದ ಅಧಿಕಾರಿಗಳು ಹಾಗೂ ಕೃಷಿ ಇಲಾಖೆಯ ತಾಂತ್ರಿಕ ಅಧಿಕಾರಿಗಳನ್ನು ಒಳಗೊಂಡಿರುತ್ತದೆ . ಕೃಷಿ ಸಂಜೀವಿನಿ ಸ್ಥಾಪನೆಯಿಂದ ಪೀಡ ಸರ್ವೇಕ್ಷಣಾ ಮತ್ತು ಸಲಹಾ ಘಟಕಗಳು ಇನ್ನೂ ಹೆಚ್ಚಿನ ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸಲು ಅನುಕೂಲಕರವಾಗಿದೆ. ಸಂಚಾರಿ ವಾಹನದ ಸೌಲಭ್ಯದಿಂದ ಹೆಚ್ಚಿನ ಸಂಖ್ಯೆಯ ರೈತರ ತಾಕುಗಳಿಗೆ ತಾಂತ್ರಿಕ ತಂಡವು ಭೇಟಿ ನೀಡಲು ಸಹಕಾರಿಯಾಗುತ್ತದೆ. ಬೆಳೆಗಳಲ್ಲಿ ಕೀಟ ಮತ್ತು ರೋಗಗಳ ಬಾಧೆಯನ್ನು ನಿಖರವಾಗಿ ಹಾಗೂ ಸಮಯೋಚಿತವಾಗಿ ಗುರುತಿಸುವ ಸಲುವಾಗಿ ರಾಜ್ಯ ಸರ್ಕಾರದ ಅನುದಾನ ಮೂಲಕ ರಾಯಚೂರು ಕೃಷಿ ವಿಶ್ವವಿದ್ಯಾಲಯ ಅಭಿವೃದ್ಧಿಪಡಿಸಿರುವ ಕೀಟ / ರೋಗಗಳ ಸಮರ್ಪಕ ನಿರ್ವಹಣೆ ಹಾಗೂ ರೈತರಿಗೆ ಸಲಹೆ ನೀಡಲು ಇ - ತಂತ್ರಾಂಶ ( ಇ - ಸ್ಯಾಪ್ ) ಬಳಕೆಯ ಮೂಲಕ ನಿಯಮಿತವಾಗಿ ರೈತರ ತಾಕುಗಳಿಗೆ ಭೇಟಿ ನೀಡುವುದು . ಸರ್ವೇಕ್ಷಣೆಯಲ್ಲಿ ಕೀಟ / ರೋಗ ಬಾಧೆ ಕಂಡುಬಂದಲ್ಲಿ ತಕ್ಷಣವೇ ರೈತರಿಗೆ ಕೈಗೊಳ್ಳಬೇಕಾದ ಸಂಭವನೀಯ ನಿರ್ವಹಣಾ ಕ್ರಮಗಳ ಮಾಹಿತಿಯನ್ನು ರೈತರ ಮೊಬೈಲ್ ಗಳಿಗೆ ಸಂದೇಶ ಅಥವಾ ಮುದ್ರಿತ ಚೀಟಿ ನೀಡುವ ಮೂಲಕ ಉತ್ಪಾದನಾ ವೆಚ್ಚ ಮತ್ತು ಬೆಳಹಾನಿಯನ್ನು ತಗ್ಗಿಸುವುದು ಯೋಜನೆಯ ಪ್ರಮುಖ ಉದ್ದೇಶವಾಗಿದೆ.

ರೈತರು ತಮ್ಮ ಮಟ್ಟದಲ್ಲಿ ರಸಗೊಬ್ಬರಗಳ ಕಲಬೆರಕೆಯನ್ನು ಕಡಿಮೆ ವೆಚ್ಚದಲ್ಲಿ ಕಂಡುಕೊಂಡು ಗುಣಮಟ್ಟದ ರಸಗೊಬ್ಬರಗಳನ್ನು ಖರೀದಿಸಬಹುದಾಗಿದೆ. ಈ ದಿಸೆಯಲ್ಲಿ ರೈತರು ಸುಲಭ ಪರೀಕ್ಷೆಗಳಿಂದ ರಸಗೊಬ್ಬರಗಳು ಕಲಬೆರಕೆಯಾಗಿದೆಯೇ ಅಥವಾ ನಕಲಿ ಗೊಬ್ಬರವೇ ಎಂದು ತಿಳಿಯಲು ಸುಲಭ ಪರೀಕ್ಷೆಯ ಪ್ರಾತ್ಯಕ್ಷಿಕೆಗಳನ್ನು ರೈತರಿಗೆ ನೀಡಲಾಗುವುದು , ತದನಂತರ ರೈತರು ತಮ್ಮ ಹಂತದಲ್ಲಿಯೇ ರಸಗೊಬ್ಬರಗಳ ಗುಣಮಟ್ಟವನ್ನು ಪ್ರಾರಂಭಿಕವಾಗಿ ತಿಳಿದು ಖರೀದಿಸಬಹುದಾಗಿದೆ.

ಹೇಗೆ ಕಾರ್ಯನಿರ್ವಹಿಸಲಿದೆ ಈ ಸಂಚಾರಿ ಕೃಷಿ ವಾಹನ?:155313 ಇದು ಕೃಷಿ ಸಂಜೀವಿನಿ ಸಹಾಯವಾಣಿ
ಇದು ಕೃಷಿ ಸಂಜೀವಿನಿ ಟೋಲ್ ಫ್ರೀ ಸಹಾಯವಾಣಿಯಾಗಿದ್ದು, ಈ ಸಂಖ್ಯೆಗೆ ಯಾವುದಾದರೂ ಜಿಲ್ಲೆಯಿಂದ ಕರೆ ಮಾಡಿದಲ್ಲಿ ಟೋಲ್ ಫ್ರೀ ಸಂಖ್ಯೆಯಿಂದ ಕರೆ ಮಾಡಿದ ರೈತರಿರುವ ಜಿ್ಲ್ಲೆಯ ಜಂಟಿ ಕೃಷಿ ನಿರ್ದೇಶಕರ ಕಚೇರಿಗೆ ಕರೆ ಹೋಗುತ್ತದೆ. ಆಗ ರೈತರು ತಮ್ಮ ಸಮಸ್ಯೆಯನ್ನು ತಿಳಿಸಿ ಪರಿಹಾರ ಪಡೆಯಬಹುದಾಗಿದ್ದು, 155313 ಆರೋಗ್ಯ ಇಲಾಖೆಯ ಆ್ಯಂಬುಲೆನ್ಸ್ ನಂತೆ ಸಹಾಯವಾಣಿಯಾಗಿ ಕೆಲಸ ಮಾಡುತ್ತದೆ.

## ಸರಕುಗಳ ಮಾರಾಟದ ಬಿಲ್ಲುಗಳನ್ನು ನೀಡದ ವರ್ತಕರಿಂದ ರೂ.16.80 ಲಕ್ಷ ದಂಡ ಸಂಗ್ರಹ

**ಬೆಂಗಳೂರು, ಜನವರಿ 05 (ಕರ್ನಾಟಕ ವಾರ್ತೆ):** ವಾಣಿಜ್ಯ ತೆರಿಗೆಗಳ ಇಲಾಖೆಯು ಬೆಂಗಳೂರಿನ ದಕ್ಷಿಣ ವಲಯದ ಜಾರಿ ಅಧಿಕಾರಿಗಳು ಡಿಸೆಂಬರ್ 2020 ರಲ್ಲಿ ಬೆಂಗಳೂರಿನ ವಿವಿಧ ಸ್ಥಳಗಳಲ್ಲಿ 150 ವರ್ತಕರ ವ್ಯಾಪಾರ ಸ್ಥಳಕ್ಕೆ ಭೇಟಿ ನೀಡಿ, ಪರೀಕ್ಷಾರ್ಥ ಖರೀದಿ ನಡೆಸಿದ ಸಂದರ್ಭದಲ್ಲಿ 113 ವರ್ತಕರು ಸದರಿ ಮಾರಾಟಕ್ಕೆ ಸೂಕ್ತ ಮಾರಾಟದ ಬಿಲ್ಲುಗಳನ್ನು ನೀಡದ ಕಾರಣ 84 ವರ್ತಕರಿಂದ ರೂ.16.80 ಲಕ್ಷ ದಂಡವನ್ನು ಸಂಗ್ರಹಿಸಲಾಗಿದೆ. ಉಳಿಕೆ 29 ವರ್ತಕರಿಂದ ರೂ.5.80 ಲಕ್ಷ ದಂಡವನ್ನು ವಸೂಲಿ ಮಾಡಲು ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.

ರಾಜ್ಯದ ಎಲ್ಲಾ ನೊಂದಾಯಿತ ವರ್ತಕರುಗಳು ಇನ್ನು ಮುಂದೆ ತಮ್ಮ ಮಾರಾಟದ ಮೇಲೆ ಸೂಕ್ತ ಮಾರಾಟದ ಬಿಲ್ಲುಗಳನ್ನು ತಪ್ಪದೇ ನೀಡುವಂತೆ ಸೂಚಿಸಿದೆ. ಮುಂದಿನ ದಿನಗಳಲ್ಲಿ ಪರೀಕ್ಷಾರ್ಥ ಖರೀದಿ ಪ್ರಕ್ರಿಯೆಯನ್ನು ಮುಂದುವರೆಸಲು ಉದ್ದೇಶಿಸಿದ್ದು, ಈ ಸಂದರ್ಭದಲ್ಲಿ ವರ್ತಕರುಗಳು ಸರಕುಗಳ ಮಾರಾಟದ ವಾಣಿಜ್ಯ ತೆರಿಗೆಗಳ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ಕಾರ್ಮಿಕ ಕಲ್ಯಾಣ ನಿದಿ ಆನ್‌ಲೈನ್ ಮೂಲಕ ಪಾವತಿಸಲು ಸೂಚನೆ

**ಬೆಂಗಳೂರು, ಜನವರಿ 05 (ಕರ್ನಾಟಕ ವಾರ್ತೆ):**

ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಕಾಯ್ದೆ 1965ರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕಾರ್ಖಾನೆಗಳು, ಪ್ಲಾಂಟೇಶನ್‌ಗಳು, ಮೋಟಾರು ವಾಹನ ಸಂಸ್ಥೆಗಳು ಹಾಗೂ 50 ಮತ್ತು ಅದಕ್ಕಿಂತ ಹೆಚ್ಚು ಕಾರ್ಮಿಕರನ್ನು ಹೊಂದಿರುವ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು/ITBT ಸಂಸ್ಥೆಗಳು, ಚಾರಿಟಬಲ್ ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು, ಕರ್ನಾಟಕ ಸೊಸೈಟಿ ಕಾಯ್ದೆ 1960 ರಡಿಯಲ್ಲಿ ನೊಂದಣಿಯಾಗಿರುವ ಸಂಘಗಳು ಕಡ್ಡಾಯವಾಗಿ ಆನ್‌ಲೈನ್ ಮುಖಾಂತರ ವಂತಿಕೆ ಪಾವತಿಸ ಬೇಕಾಗಿರುತ್ತದೆ. ನಿರಸನಗೊಳಿಸಿ ಕರ್ನಾಟಕ ರಾಜ್ಯದ ವಿಶೇಷ ರಾಜ್ಯ ಪತ್ರಿಕೆಯಲ್ಲಿ ಪ್ರಕಟಗೊಳಿಸಲಾಗಿದೆ. ಈ ತಿದ್ದುಪಡಿ ಕಾಯ್ದೆಯನ್ನು ಮೂಲ ಕಾರ್ಮಿಕ ಕಲ್ಯಾಣ ನಿಧಿ ಕಾಯ್ದೆ 1965 ಸೆಕ್ಷನ್ 7ಎ ಗೆ ಸೇರಿಸಲಾಗಿದೆ. ಆದ್ದರಿಂದ ಕಾರ್ಮಿಕರು ರೂ.20/– ಮಾಲೀಕರು ರೂ.40/– ರಂತೆ ಒಟ್ಟು ರೂ 60/– ರಂತೆ ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿಗೆ ವಂತಿಕೆಯನ್ನು Online ಮುಖಾಂತರ ಪಾವತಿಸುವುದು ಕಡ್ಡಾಯವಾಗಿರುತ್ತದೆ. ಈ ಕಾಯ್ದೆಯಡಿಯಲ್ಲಿ ಆನ್‌ಲೈನ್ ಮುಖಾಂತರ ವಂತಿಗೆ ಪಾವತಿಸಬೇಕಾದ ವೆಬ್‌ಸೈಟ್ ವಿಳಾಸ www.klwb.karnataka.gov.in ವಂತಿಗೆ ಪಾವತಿಗೆ ಕಡೆಯ ದಿನಾಂಕ: 15–01–2021 (2020 ನೇ ಕ್ಯಾಲೆಂಡರ್ ವರ್ಷಕ್ಕೆ)

ನಿಯಮ ಪಾಲಿಸದ ಸಂಸ್ಥೆಗಳಿಗೆ ಮೊದಲ 3 ತಿಂಗಳಿಗೆ ಶೇಕಡ 12% ರಂತೆ ಹಾಗೂ ನಂತರದ ತಿಂಗಳಿಗೆ ಶೇಕಡ 18% ಬಡ್ಡಿಯನ್ನು ದಂಡವಾಗಿ ವಿಧಿಸಬಹುದು, ಹಾಗು ಕಲ್ಯಾಣ ಆಯುಕ್ತರಿಂದ ತಪಾಸಣೆ/ತನಿಖೆಗೆ ಒಳಪಡಬೇಕಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8277291175, 8277120505, 080–23475188 ಮೂಲಕ ಸಂಪರ್ಕಿಸಬಹುದು.

**Karnataka State Pollution Control Board**
**ParisaraBhavan, Bengaluru**
**AQI of the CAAQM stations established in Bengaluru City**
**Date :5.1.2021**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 82 | Satisfactory | $PM_{.10}$ |
| 2 | Jayanagar 5th Block, Shalini ground | 72 | Satisfactory | $PM_{.10}$ |
| 3 | KAVIKA, Mysore Road | 75 | Satisfactory | $PM_{.10}$ |
| 4 | Rajeev Gandhi Institute of Chest Disease, NIMHANS, Hombegowda Nagar | 49 | Good | $PM_{.10}$ |
| 5 | HSR Layout, near Central Silkboard | 52 | Satisfactory | $PM_{10}$ |
| 6 | City Railway Station, Magestic, Bengaluru | 99 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 80 | Satisfactory | $PM_{10}$ |
| 8 | BWSSB, Kadabesanahalli | 32 | Good | $PM_{2.5}$ |
| 9 | Peenya | 64 | Satisfactory | $PM_{2.5}$ |

| 10 | BTM Layout | * | * | * |
|---|---|---|---|---|

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |

**ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ**

**ಪರಿಸರ ಭವನ, ಬೆಂಗಳೂರು.**

**ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ನಿರಂತರ ಪರಿವೀಕ್ಷಕ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು**

**ದಿನಾಂಕ: 5.1.2021**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 82 | ತೃಪ್ತಿಕರ | $PM_{.10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 72 | ತೃಪ್ತಿಕರ | $PM_{10}$ |
| 3 | ಕವಿಕ, ಮೈಸೂರುರಸ್ತೆ | 75 | ತೃಪ್ತಿಕರ | $PM_{10}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 49 | ಉತ್ತಮ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರಗೇಷೆ ಮಂಡಳಿ ಹತ್ತಿರ | 52 | ತೃಪ್ತಿಕರ | $PM_{10}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 99 | ತೃಪ್ತಿಕರ | $PM_{10}$ |

| | | | | |
|---|---|---|---|---|
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 80 | ತೃಪ್ತಿಕರ | $PM_{10}$ |
| 8 | BWSSB, ಕಾಡಬೀಸನಹಳ್ಳಿ | 32 | ಉತ್ತವ | $PM_{2.5}$ |
| 9 | ಪೀಣ್ಯ | 64 | ತೃಪ್ತಿಕರ | $PM_{2.5}$ |
| 10 | ಬಿಟಿಎಂ ಲೇಔಟ್ | * | * | * |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |